## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

### ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 100, ಬಸವೇಶ್ವರನಗರ, ಬೆಂಗಳೂರು

ಸಂಖ್ಯೆ:ಸ.ಅ/ವಾ-100/ಪಿಆರ್/ / 2020-21 ದಿನಾಂಕ: 05.04.2021

### ವಾರ್ಡ್ ಸಮಿತಿ ಸಭೆಯ ನಡವಳಿಗಳು:-

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಆದೇಶ ಸಂಖ್ಯೆ: ಬಿ12[5]ಪಿಆರ್/35/2020-21. ದಿನಾಂಕ: 21.09.2020ರ ಆದೇಶದಂತೆ ದಿನಾಂಕ: 05.04.2021ರಂದು ವಾರ್ಡ್ ನಂ. 100 ಬಸವೇಶ್ವರನಗರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು:

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. 1. ಶ್ರೀ ದೃವರಾಜ್, ನೋಡಲ್ ಅಧಿಕಾರಿಗಳು, ಎಡಿ.ಟಿ.ಪಿ. ವಾರ್ಡ್ ನಂ. 100
2. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 100 [ಪ್ರಭಾರ]
3. ಶ್ರೀಮತಿ ಲತಾ, ಕಿರಿಯ ಅಭಿಯಂತರರು, ಬೆಸ್ಕಾಂ
4. ಶ್ರೀ ರಾಜಣ್ಣ, ಎ.ಎಸ್.ಐ. ಬಸವೇಶ್ವರನಗರ ಪೋಲಿಸ್ ಠಾಣೆ,
3. ಶ್ರೀಮತಿ ಸಂಧ್ಯಾ. ಕೆ.ಪಿ. ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಸತೀಶ್.ಹೆಚ್, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ರಮೇಶ್. ಹೆಚ್.ಟಿ. ಹಿರಿಯ ಪಶುಪಾಲನ ಪರಿವೀಕ್ಷಕರು
5. ಶ್ರೀ ಶಿವರಾಂ ಅರಣ್ಯಾಧಿಕಾರಿಗಳು
8. ಶ್ರೀ ಮಲ್ಲೇಶ್, ಕಂದಾಯ ಅಧಿಕಾರಿ
9. ಶ್ರೀ ಮೋಹನ್ ಕುಮಾರ್ , ಬಿ.ಡ್ಬ್ಲ್ಯುಎಸ್.ಎಸ್.ಬಿ. ಅಧಿಕಾರಿ.

1. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಜಡ್ಜಸ್ ಕಾಲೊನಿ ಇಲ್ಲಿ ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸಲು ರಸ್ತೆಯನ್ನು ಕತ್ತರಿಸಿ, ದುರಸ್ಥಿಪಡಿಸದೆ ಇರುವುದರಿಂದ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಶ್ರೀಮತಿ ಲತಾ, ಕಿರಿಯ ಅಭಿಯಂತರರು, ಬೆಸ್ಕಾಂ ರವರು ಸದರಿ ಸ್ಥಳವನ್ನು ಪರಿಶೀಲಿಸಿ, ದುರಸ್ಥಿಪಡಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.
2. ಶ್ರೀ ರಮೇಶ್ ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ನೇತಾಜಿ ಆಟದ ಮೈಧಾನದಲ್ಲಿ ವಿದ್ಯುತ್ ದೀಪಗಳನ್ನು ಅಲವಡಿಸಲು ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿತ್ತು. ಆದರೆ ಇದುವರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಸಭೆಗೆ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ. ಈ ವಿಷುಯದ ಬಗ್ಗೆ ಸಂಬಂಧಪಟ್ಟವರಿಗೆ ತಿಳಿಸಲು ವಾರ್ಡ್ ಕಾರ್ಯದರ್ಶಿಗೆ ಸೂಚಿಸಿದರು.
3. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಇಲ್ಲದೆ ಇರುವುದರಿಂದ ಇಲ್ಲಿನ ನಿವಾಸಿಗಳಿಗೆ ಲಸಿಕೆ ಮತ್ತು ಕರೋನಾಗೆ ಸಂಬಂಧಪಟ್ಟ ಕಾಯಿಲೆಗೆ ಚಿಕಿತ್ಸೆ ಪಡೆಯಲು ತೊಂದರೆಯಾಗುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಪಾಲಿಕೆಯ ಜಾಗವನ್ನು ಗುರುತಿಸಿ, ಮಾಹಿತಿಯನ್ನು ನೀಡಿದಲ್ಲಿ ಮಾನ್ಯ ಸಚಿವರೊಂದಿಗೆ ಚರ್ಚಿಸಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು.
4. ವಾರ್ಡ್ ವ್ಯಾಪ್ತಿಯಲಿ ಬರುವ ವಿದ್ಯುತ್ ಕಂಬಗಳಿಗೆ ಟೈಮರನ್ನು ಅಳವಡಿಸದೆ ಇರುವುದರಿಂದ ಬೆಳಗಿನ ಜಾವದಲ್ಲಿ ಬೀದಿ ದೀಪಗಳು ಉರಿಯುತ್ತಿರುವುದು ಕಂಡು ಬಂದಿರುತ್ತದೆ. ಆದುದರಿಂದ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಸಭೆಯಲ್ಲಿ ಕೋರಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಸಂಬಂಧಪಟ್ಟ ಇಲಾಖೆಯವರಿಗೆ ತಿಳಿಸಲಾಗುವುದೆಂದು ಸಭೆಗೆ ತಿಳಿಸಿದರು.

ಪು.ತಿ.ನೋ.

Scanned with CamScanner

5. ಜಿಯೋ ಕೇಬಲ್ ಅಳವಡಿಸಲು ರಸ್ತೆಯನ್ನು ಕತ್ತರಿಸಿ, ಸರಿಯಾಗಿ ಗುಂಡಿಗಳನ್ನು ಮುಚ್ಚದೇ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ವಾರ್ಡ್ ಕಮಿಟಿ ಸದಸ್ಯರು ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಗುತ್ತಿಗೆದಾರರನ್ನು ಕರೆಸಿ ಸರಿಯಾಗಿ ಗುಂಡಿಗಳನ್ನು ಮುಚ್ಚುವಂತೆ ತಿಳಿಸಲು ವಾರ್ಡ್ ಅಭಿಯಂತರರಿಗೆ ತಿಳಿಸಿದರು.

6. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ವಾರ್ಡಿನಲ್ಲಿ ಸಿಲ್ಟ್ ಅಂಡ್ ಟ್ರಾಕ್ಟರ್ ಇಲ್ಲದೆ ಇರುವುದರಿಂದ ವಾರ್ಡಿನಲ್ಲಿ ತುರ್ತಾಗಿ ಬರುವ ದೂರುಗಳನ್ನು ಬಗೆ ಹರಿಸಲು ಕಷ್ಟಕರವಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ವಾರ್ಡ್ ಅಭಿಯಂತರರಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ, ಮೇಲಾಧಿಕಾರಿಗಳಿಗೆ ಸಲ್ಲಿಸುವಂತೆ ತಿಳಿಸಿದರು.

7. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಈಗಾಗಲೇ ಬೇಸಿಗೆ ಕಾಲ ಪ್ರಾರಂಭವಾಗಿರುವುದರಿಂದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆಯವರು ನೀರಿನ ಅಭಾವವಾಗದಂತೆ ಮುಂಜಾಗ್ರತಾ ಕ್ರಮವನ್ನು ವಹಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗೆ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 100

ನೋಡಲ್ ಅಧಿಕಾರಿಗಳು,
ವಾರ್ಡ್ ನಂ. 100/ಬಸವೇಶ್ವರನಗರ.

Scanned with CamScanner